ನೀರಾವರಿ ಪಂಪುಸೆಟ್ಟುಗಳು ಬಳಕೆಯಿಂದಾಗಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಮೇಲೆ ಅಧಿಕ ಲೋಡ್ ಬೀಳುತ್ತಿರುವುದರಿಂದ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ವಿಫಲಗೊಳ್ಳಲು ಮುಖ್ಯ ಕಾರಣವಾಗಿದೆ.

ಇ) ಲೈನ್‌ಮೆನ್ / ಸಹಾಯಕ ಲೈನ್‌ಮೆನ್ ಹುದ್ದೆಗಳು ಸಾಕಷ್ಟು ಖಾಲಿ ಇರುತ್ತದೆ. ಸದರಿ ಹುದ್ದೆಗಳು ಖಾಲಿ ಇರುವುದನ್ನು ಗಮನಿಸಿ 1200 ಸಹಾಯಕ ಲೈನ್‌ಮೆನ್ ಹುದ್ದೆಗಳ ನೇಮಕಾತಿ ಬಗ್ಗೆ ಪರಿಶೀಲಿಸಲಾಗುತ್ತಿದ್ದು ಪರಿಷ್ಕೃತ ಪ್ರಸ್ತಾವನೆಯನ್ನು ಕಳುಹಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವನ್ನು ದಿನಾಂಕ 31-08-2000 ರಂದು ಕೋರಲಾಗಿದೆ. ಪರಿಷ್ಕೃತ ಪ್ರಸ್ತಾವನೆ ಬಂದ ನಂತರ ನೇಮಕಾತಿ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಆದಾಗ್ಯೂ ಪ್ರಸ್ತುತ ವಿಭಾಗವಾರು ಕೆಲಸದ ಒತ್ತಡವಿರುವುದರಿಂದ ಗುತ್ತಿಗೆ ಆಧಾರದ ಮೇಲೆ ಗ್ಯಾಂಗ್‌ಮೆನ್/ಮಾನ್‌ಸೂನ್ ಗ್ಯಾಂಗ್ ಮೆನ್‌ಗಳನ್ನು ಆಗಾಗ್ಗೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಂಡು ಕೆಲಸ ಕಾರ್ಯಗಳನ್ನು ನಿಭಾಯಿಸಲಾಗುತ್ತಿದೆ.

ಕಲಾದಗಿ-ಕಾರತಕೆ ಬ್ರಿಡ್ಜ್ ಕಮ್ ಬ್ಯಾರೇಜ್ ನಿರ್ಮಾಣ

2845 (3667) ಶ್ರೀ ಪಾಟೀಲ್ ಜೆ. ಟಿ. (ಬೀಳಗಿ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗಲಕೋಟೆ ಜಿಲ್ಲೆಯಲ್ಲಿ ಘಟಪ್ರಭಾ ನದಿಗೆ ಅಡ್ಡವಾಗಿ ಕಟ್ಟುತ್ತಿರುವ ಕಲಾದಗಿ ಕಾತರಕೆ ಬ್ರಿಡ್ಜ್ ಕಮ್ ಬ್ಯಾರೇಜ್ ನಿರ್ಮಾಣ ಪ್ರಾರಂಭವಾಗಿ ಎಷ್ಟು ವರ್ಷಗಳಾದವು:

ಆ) ಈ ಕಾರ್ಯ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ ಬ್ರಿಡ್ಜ್ ಕಮ್ ಬ್ಯಾರೇಜ್ ಕೆಲಸವನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಕಲಾದಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯು 18ನೇ ಫೆಬ್ರವರಿ 98ರಲ್ಲಿ ಪ್ರಾರಂಭವಾಗಿರುತ್ತದೆ.

ಆ) ಬಂದಿದೆ

ಇ) ಬ್ಯಾರೇಜ್ ನಿರ್ಮಾಣಕ್ಕಾಗಿ ಮಾತ್ರ ಟೆಂಡರ್ ಕರೆದು ಕೆಲಸ ಪ್ರಾರಂಭಿಸಿದ್ದು, ಗುತ್ತಿಗೆದಾರರು ನೀರೆತ್ತುವಿಕೆಯ ಹೆಚ್ಚುವರಿ ವೆಚ್ಚವನ್ನು ಪಾವತಿಸಲು ಕೇಳಿ ಕಾಮಗಾರಿ ಸ್ಥಗಿತಗೊಳಿಸಿರುತ್ತಾರೆ. ಸ್ಥಳೀಯ ಶಾಸಕರ ಮತ್ತು ಜನಪ್ರತಿನಿಧಿಗಳ ಒತ್ತಾಯದಿಂದ ಬ್ರಿಡ್ಜ್ ಕಮ್ ಬ್ಯಾರೇಜ್ ಆಗಿ ಪರಿವರ್ತಿಸಬೇಕಾಗಿರುವುದರಿಂದ, ಬ್ರಿಡ್ಜ್ ಕಂ ಬ್ಯಾರೇಜ್‌ನ ಬದಲಿ ವಿನ್ಯಾಸ ಅನುಮೋದನೆ ಹಂತದಲ್ಲಿದೆ. ಕೆಲಸವನ್ನು ಶೀಘ್ರವಾಗಿ ಮರು ಪ್ರಾರಂಭಿಸಲು ಸಾಧ್ಯವಾದ ಎಲ್ಲಾ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳಲಾಗುವುದು.